# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 300 (2139)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು )

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು : ಅಬಕಾರಿ ಸಚಿವರು

ವಿಷಯ : ಬೀದರ್ ಜಿಲ್ಲೆಯಲ್ಲಿ ಕಳ್ಳಭಟ್ಟಿ ತಯಾರಿಕೆ ಹಾಗೂ ಮದ್ಯ ಕಳ್ಳ ಸಾಗಾಣೆ ಕುರಿತು

(ಅ) ಬೀದರ್ ಜಿಲ್ಲೆಯಲ್ಲಿ ಕಳ್ಳಭಟ್ಟಿ ಸಾರಾಯಿ ತಯಾರಿಕೆ ಹೆಚ್ಚಾಗಿರುವುದು ಹಾಗೂ ನೆರೆಯ ರಾಜ್ಯಗಳಿಂದ ರಾಜ್ಯಕ್ಕೆ ಮದ್ಯವು ಕಳ್ಳ ಸಾಗಾಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಯಲ್ಲಿ ಕಳ್ಳಭಟ್ಟಿ ಸಾರಾಯಿ ತಯಾರಿಕಾ ಕೇಂದ್ರಗಳ ಮೇಲೆ ದಾಳಿ ಮಾಡಿ ಎಷ್ಟು ಪ್ರಕರಣಗಳನ್ನು ದಾಖಲಿಸಿ ಅಪರಾಧಿಗಳನ್ನು ಬಂಧಿಸಲಾಗಿದೆ ಮತ್ತು ಶಿಕ್ಷೆಗೊಳಪಡಿಸಲಾಗಿದೆ; (ಮಾಹಿತಿ ನೀಡುವುದು)

(ಇ) ನೆರೆಯ ರಾಜ್ಯಗಳಿಂದ ಮದ್ಯ ಕಳ್ಳಸಾಗಾಣೆಯ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ ಮತ್ತು ಎಷ್ಟು ಅಪರಾಧಿಗಳಿಗೆ ಶಿಕ್ಷೆವಿಧಿಸಲಾಗಿದೆ;

(ಈ) ಕಳ್ಳಭಟ್ಟಿ ಮಾರಾಟ ಕೇಂದ್ರಗಳನ್ನು ಹಾಗೂ ಮದ್ಯ ಕಳ್ಳ ಸಾಗಾಣೆಕೆಯನ್ನು ತಡೆಗಟ್ಟಲು ಸರ್ಕಾರವು ಯಾವ ಯಾವ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)